# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1558 |
| ಮಾನ್ಯ ಸದಸ್ಯರ ಹೆಸರು | ಡಾ|| ಉಮಾಶ್ರೀ<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 21/03/2025 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಟ್ಟಡ ಕಾರ್ಮಿಕರಂತೆ ನೇಕಾರ ಕಾರ್ಮಿಕರಿಗೂ ಸೌಲಭ್ಯ ನೀಡಬೇಕೆಂಬ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. ಕಟ್ಟಡ ಕಾರ್ಮಿಕರಂತೆ ಸಾಮಾಜಿಕ ಭದ್ರತಾ ಸೌಲಭ್ಯ ನೀಡುವಂತೆ ಕೋರಿ ನೇಕಾರ ವಲಯದಲ್ಲಿ ತೊಡಗಿಸಿಕೊಂಡ ಸಂಘ ಹಾಗೂ ಸಂಘಟನೆಗಳು ಸರ್ಕಾರಕ್ಕೆ ಹಾಗೂ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಗೆ ಮನವಿ ಪತ್ರಗಳನ್ನು ಸಲ್ಲಿಸಿರುತ್ತಾರೆ. |
| ಆ) | ಹಾಗಿದ್ದಲ್ಲಿ, ಇವರ ಈ ಬೇಡಿಕೆ ಪೂರೈಸಲು ಸರ್ಕಾರ ಯಾವ ರೀತಿ ಕ್ರಮ ತೆಗೆದುಕೊಂಡಿದೆ. | ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ "ಅಂಬೇಡ್ಕರ್ ಕಾರ್ಮಿಕರ ಸಹಾಯ ಹಸ್ತ ಯೋಜನೆ" ಯಡಿ ಪ್ರಸ್ತುತ ಒಟ್ಟು 91 ವರ್ಗಗಳ ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಿ ಗುರುತಿನ ಚೀಟಿ ವಿತರಿಸಲಾಗುತ್ತಿದ್ದು, ಅವರಲ್ಲಿ ನೇಕಾರ ವರ್ಗದ ಕಾರ್ಮಿಕರು ಸಹಾ ಸೇರಿರುತ್ತಾರೆ. ಈ ಯೋಜನೆಯಡಿ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br><br>**(ಅ) ಅಪಘಾತ ಪರಿಹಾರ ಸೌಲಭ್ಯ :**<br>➢ ಮರಣ ಪ್ರಕರಣ _ ರೂ.1.00 ಲಕ್ಷದವರೆಗೆ ಅಪಘಾತ ಪರಿಹಾರ.<br>➢ ಅಪಘಾತದಿಂದುಟಾಗುವ ಸಂಪೂರ್ಣ ಶಾಶ್ವತ/ ಭಾಗಶಃ ದುರ್ಬಲತೆ ಪರಿಹಾರ (ಶೇಕಡವಾರು ದುರ್ಬಲತೆ ಆಧಾರದ ಮೇಲೆ) - ರೂ. 1.00 ಲಕ್ಷದವರೆಗೆ ಪರಿಹಾರ.<br>➢ ಆಸ್ಪತ್ರೆ ವೆಚ್ಚ ಮರುಪಾವತಿ - ರೂ. 50,000/-ದವರೆಗೆ.<br><br>**(ಆ) ಸಹಜ ಮರಣ ಪರಿಹಾರ (ಅಂತ್ಯಕ್ರಿಯೆ ಧನಸಹಾಯ)**<br>ನೋಂದಾಯಿತ ಫಲಾನುಭವಿಯು ವಯೋಸಹಜ /ಖಾಯಿಲೆ/ ಅಕಾಲಿಕ ಅಥವಾ ಇನ್ನಿತರೆ ಕಾರಣಗಳಿಂದ ಮರಣ ಹೊಂದಿದಲ್ಲಿ ಫಲಾನುಭವಿಯ ಕುಟುಂಬದವರಿಗೆ ಅಂತ್ಯಕ್ರಿಯೆ ವೆಚ್ಚಕ್ಕಾಗಿ ರೂ. 10,000/-ಗಳ ಧನ ಸಹಾಯ ಸೌಲಭ್ಯ. |
| ಇ) | ಇವರ ಬೇಡಿಕೆ ಈಡೇರಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು? | |

ಕಾಇ 128 ಎಲ್ ಇಟಿ 2025

(ಸಂತೋಷ್ ಎಸ್. ಲಾಡ್)
ಕಾರ್ಮಿಕ ಸಚಿವರು